# ಕರ್ನಾಟಕ ವಿಧಾನ ಪರಿಷತ್ತು



ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 508
ಸದಸ್ಯರ ಹೆಸರು : ಶ್ರೀ ಗೋವಿಂದರಾಜು
ಉತ್ತರಿಸುವ ದಿನಾಂಕ : 16.09.2021
ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ನಿಗಮ ನಿಯಮಿತ, ಬೆಳಗಾವಿ, ಇಲ್ಲಿ ದಿನಗೂಲಿ ಆಧಾರದ ಮೇಲೆ ಜಲಸಂಪನ್ಮೂಲ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 1375 ನೌಕರರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಇಂತಹ ಯಾವುದೇ ನಿಗಮವು ಜಲ ಸಂಪನ್ಮೂಲ ಇಲಾಖೆಯ ಅಡಿಯಲ್ಲಿ ಇರುವುದಿಲ್ಲ. |
| (ಆ) | ಸದರಿ ನೌಕರರುಗಳು ಕಳೆದ 15 ವರ್ಷಗಳಿಂದ ದಿನಗೂಲಿ ನೌಕರರುಗಳಾಗಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ವಯಿಸುವುದಿಲ್ಲ. |
| (ಇ) | ಹಾಗಿದ್ದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ಸಾಮಾನ್ಯ ವರ್ಗಗಳಿಗೆ ಸೇರಿದ ಈ ನೌಕರಗಳನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು | |
| (ಈ) | ಸರ್ವೋಚ್ಚ ನ್ಯಾಯಾಲಯವು ದಿನಗೂಲಿ ನೌಕರರ ಸೇವೆಯನ್ನು ಖಾಯಂಗೊಳಿಸಿ ಆರ್ಥಿಕ ಸೌಲಭ್ಯಗಳನ್ನು ಕಲ್ಪಿಸುವಂತೆ ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಈ ಅಂಶಕ್ಕೆ ಸಂಬಂದಿಸಿದಂತೆ ಜಲಸಂಪನ್ಮೂಲ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| (ಉ) | ಮಾನವ ಹಕ್ಕುಗಳ ಆಯೋಗವು ದಿನಗೂಲಿ ನೌಕರರಿಗೆ ಸೇವಾ ಭದ್ರತೆ ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರಕ್ಕೆ ಸೂಚನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಈ ಅಂಶಕ್ಕೆ ಸಂಬಂಧಿಸಿದಂತೆ ಜಲಸಂಪನ್ಮೂಲ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| (ಊ) | ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 17.12.2019ರ ಆದೇಶ ಸಂಖ್ಯೆ: ಡಬ್ಲ್ಯೂ.ಪಿ. 869-875-877-880-882-883-885-902-904-909- | ಸದರಿ ರಿಟ್ ಅರ್ಜಿಗಳಲ್ಲಿ ಅರ್ಜಿದಾರರ ಮನವಿಯನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ವಜಾಗೊಳಿಸಿದ್ದು, ದಿನಗೂಲಿ |

| | | |
|---|---|---|
| | 911-965-971-999-2009 (ಎಸ್) ಆದೇಶದನದನ್ವವಯ ದಿನಗೂಲಿ ನೌಕರರುಗಳನ್ನು ಖಾಯಂಗೊಳಿಸಲು ಆದೇಶ ಹೊರಡಿಸಿದ್ದರೂ ಸಹ ಸರ್ಕಾರ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು : | ನೌಕರರನ್ನು ಖಾಯಂಗೊಳಿಸಲು ನಿರ್ದೇಶನ ನೀಡಿರುವುದಿಲ್ಲ.<br><br>ಈ ತೀರ್ಪನ್ನು ಪ್ರಶ್ನಿಸಿ ನಿಗಮದ ನೌಕರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆಯ : 2790/2010, 2087/2010 ಮತ್ತು 2489-2603/2010 ನ್ನು ದಾಖಲಿಸಿದ್ದರು. ಸದರಿ ಅರ್ಜಿಯನ್ನು ಮರು ಪರಿಶೀಲಿಸಿದ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.08.2011 ರಂದು ನೀಡಿದ ತೀರ್ಪಿನಲ್ಲಿ ದಿನಾಂಕ: 17.12.2009 ರ ತೀರ್ಪನ್ನು ತಳ್ಳಿ ಹಾಕಿತ್ತು.<br><br>ಮೇಲ್ಕಂಡ ತೀರ್ಪನ್ನು ಪ್ರಶ್ನಿಸಿ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ SLP ಸಂಖ್ಯೆ: 3014-3130/2012 ನ್ನು ದಾಖಲಿಸಿದ್ದು, ಈ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 21.02.2012 ರ ಮಧ್ಯಂತರ ಆದೇಶದಲ್ಲಿ ತಡೆಯಾಜ್ಞೆ ನೀಡಿರುತ್ತದೆ.<br><br>ಪ್ರಸ್ತುತ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ಸಿವಿಲ್ ಅಪೀಲ್ ಅರ್ಜಿಯು ವಿಚಾರಣೆಗೆ ಬಾಕಿ ಇರುತ್ತದೆ |
| (ಋ) | ಯಾವ ಕಾಲಮಿತಿಯೊಳಗಾಗಿ ಈ ನೌಕರರುಗಳನ್ನು ಖಾಯಂಗೊಳಿಸಲಾಗುವುದು ಮತ್ತು ಸೇವಾ ಭದ್ರತೆಯನ್ನು ಒದಗಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ದಿನಗೂಲಿ ನೌಕರರ ಸಕ್ರಮಾತಿ ಕುರಿತು ಮಾನ್ಯ ನ್ಯಾಯಾಲಯದ ಸಂವಿಧಾನ ಪೀಠವು ಉಮಾದೇವಿ ಪ್ರಕರಣದಲ್ಲಿ ನೀಡಲಾದ ತೀರ್ಪಿನನ್ವಯ ಪರಿಶೀಲಿಸಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012 ನ್ನು ಜಾರಿಗೆ ತರಲಾಗಿದ್ದು, ಅದರಡಿ ಅರ್ಹ ದಿನಗೂಲಿ ನೌಕರರಿಗೆ ಸೇವಾ ಭದ್ರತೆ ಹಾಗೂ ಸೌಲಭ್ಯಗಳನ್ನು ನೀಡಲಾಗಿದೆ. ಕೆ.ಎಸ್.ಸಿ.ಸಿ. ನಿಗಮದಲ್ಲಿ ಹಾಗೂ ಜಲಸಂಪನ್ಮೂಲ ಇಲಾಖೆಯ ಇತರೆ ನಿಗಮಗಳಲ್ಲಿ ಖಾಯಂಗೊಳಿಸಲಾಗಿರುವ ಬಗ್ಗೆ ಸರ್ಕಾರದ ವಿವಿಧ ಅಧಿಕಾರಿಗಳ ಸಹಿಯನ್ನು ಫೋರ್ಜರಿ ಮಾಡಿ ಆದೇಶಗಳನ್ನು ಹೊರಡಿಸಿದ್ದರಿಂದ ಈ ಬಗ್ಗೆ ವಿಧಾನಸೌಧ, ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ತನಿಖೆ ಪ್ರಗತಿಯಲ್ಲಿರುತ್ತದೆ |

ಸಂಖ್ಯೆ: ಜಸಂಇ 177 ಸೇಇಸಿ 2021

(ಡಿ.ಕೆ.ಶಿವಕುಮಾರ್)
ಮಾನ್ಯ ಉಪಮುಖ್ಯಮಂತ್ರಿ